ಕರ್ನಾಟಕ ಸರ್ಕಾರ

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-03**

ಸಂಖ್ಯೆ:ಎಸ್1/ವಾ.ಪ/ಜನವರಿ-22/ಅಧಿ.ಸು.ಜ್ಞಾ/50/2021-22 ದಿನಾಂಕ: 01/01/2022

**ತುರ್ತಾಗಿ ಮತ್ತು ಕಡ್ಡಾಯವಾಗಿ ಪರಿಶೀಲಿಸುವುದು**

**ಸುತ್ತೋಲೆ**

**ವಿಷಯ:** ಜನವರಿ-2022 ರ ಮಾಹೆಯಲ್ಲಿ ನಡೆಯಲಿರುವ ವಾಣಿಜ್ಯ ಪರೀಕ್ಷೆಗೆ ಹಾಜರಾಗುತ್ತಿರುವ ಅಭ್ಯರ್ಥಿಗಳ ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಳ್ಳುವ ಬಗ್ಗೆ.

******

ಜನವರಿ-2022ರ ಮಾಹೆಯ ವಾಣಿಜ್ಯ ಪರೀಕ್ಷೆಗೆ ನಿಮ್ಮ ಸಂಸ್ಥೆಯಿಂದ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲಾಗಿದೆ. ನಿಮ್ಮ ಸಂಸ್ಥೆಗೆ ಸಂಬಂಧಪಟ್ಟ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದಲ್ಲಿ ಲಭ್ಯವಿರುವ ಸಂಬಂಧಪಟ್ಟ INSTITUTE LOGIN ಮೂಲಕ ನಿಮ್ಮ ಸಂಸ್ಥೆಗಳ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರಿಶೀಲಿಸಿ ಹಾಗೂ ಅಗತ್ಯವಿದ್ದಲ್ಲಿ ವಿದ್ಯಾರ್ಥಿಗಳ ವೈಯಕ್ತಿಕ ವಿವರಗಳ ತಿದ್ದುಪಡಿಗಳನ್ನು ದಿನಾಂಕ: 05.01.2022 ರೊಳಗೆ ಮಂಡಳಿಯನ್ನು ಸಂಪರ್ಕಿಸಿ ಅಪ್‌ಡೇಟ್ ಮಾಡಲು ಸೂಚಿಸಿದೆ.

ಸದರಿ ಪ್ರವೇಶ ಪತ್ರಗಳಲ್ಲಿ ಯಾವುದೇ ತಪ್ಪುಗಳಿಲ್ಲದಿರುವ ಬಗ್ಗೆ ಈ ಕೆಳಕಂಡ ಅಂಶಗಳನ್ನು ಪರಿಶೀಲಿಸುವುದು. ಒಂದು ವೇಳೆ ಏನಾದರೂ ತಪ್ಪುಗಳು ಕಂಡು ಬಂದಲ್ಲಿ ಕೂಡಲೇ ಶಾಖಾಧಿಕಾರಿಗಳು, ವಾಣಿಜ್ಯಶಾಖೆ ರವರ ಗಮನಕ್ಕೆ ತಂದು ಸರಿಪಡಿಸಿಕೊಳ್ಳುವುದು.

1. ಮಂಡಳಿಯ ಜಾಲತಾಣ https://sslc.karnataka.gov.in ನಲ್ಲಿ ಲಭ್ಯವಿದೆ.
2. ಲಾಗಿನ್ ಆದ ನಂತರ ಮೊದಲು ಆಯಾ ಸಂಸ್ಥೆಯ ಪ್ರಾಂಶುಪಾಲರು ತಮ್ಮ ಸಂಸ್ಥೆಯ USER NAME PASS WORD ಬಳಸಿ ಎಲ್ಲಾ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರಿಶೀಲಿಸಬೇಕು.
3. AUTOFETCH ಆಗಿರುವ ಮಾಹಿತಿಯನ್ನು ಅಂದರೆ ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮದಿನಾಂಕ, ಲಿಂಗ, ಇವುಗಳನ್ನು ಹೊರತುಪಡಿಸಿ, ಉಳಿದ ಮಾಹಿತಿಯನ್ನು ಅಂದರೆ ಅಭ್ಯರ್ಥಿಯ ದೈಹಿಕ ಸ್ಥಿತಿ, ಭಾವಚಿತ್ರ, ಸಹಿ ಹಾಗೂ ಅಭ್ಯರ್ಥಿಯು ಹಾಜರಾಗುವ ತಂಡ(Batch) ಇವುಗಳನ್ನು ಮಾತ್ರ ತಿದ್ದುಪಡಿ ಮಾಡಿಕೊಳ್ಳಬಹುದಾಗಿದೆ.
4. ನಿಮ್ಮ ಸಂಸ್ಥೆಯಿಂದ ಕಳುಹಿಸಿದ ವಿದ್ಯಾರ್ಥಿಗಳ ಸಂಖ್ಯೆಗೆ ಅನುಸಾರ ನಿಮ್ಮ ಸಂಸ್ಥೆಯಲ್ಲಿ ಸ್ವೀಕೃತವಾದ ಪ್ರವೇಶ ಪತ್ರಗಳ ಸಂಖ್ಯೆಗಳು ಸರಿ ಹೊಂದುತ್ತಿವೆಯೇ? ಒಂದು ವೇಳೆ ಸರಿ ಹೊಂದದಿದ್ದಲ್ಲಿ ಯಾವ ಅಭ್ಯರ್ಥಿಯ ಪ್ರವೇಶ ಪತ್ರ ಬಂದಿಲ್ಲವೆಂಬುದನ್ನು ಖಚಿತಪಡಿಸಿಕೊಂಡು ಅಗತ್ಯ ಕ್ರಮಕ್ಕಾಗಿ ಸಮರ್ಥನೆಯೊಂದಿಗೆ/ದಾಖಲೆಗಳನ್ನು ಕಳುಹಿಸಿಕೊಡುವುದು.
5. ಸಂಸ್ಥೆಯ ಸಂಕೇತದಲ್ಲಿ ಹಾಗೂ ಸಂಸ್ಥೆಯ ಹೆಸರಿನಲ್ಲಿ ಏನಾದರೂ ವ್ಯತ್ಯಾಸ ಕಂಡುಬರುತ್ತಿದ್ದಲ್ಲಿ ಸಮರ್ಥನೆಯೊಂದಿಗೆ ಸರಿಪಡಿಸಲು ಶಾಖೆಗೆ ಕಳುಹಿಸಿಕೊಡುವುದು.
6. ಸಂಸ್ಥೆಯಿಂದ ಅಪ್ ಲೋಡ್ ಮಾಡಿರುವಂತೆ ವಿದ್ಯಾರ್ಥಿಗಳ ಭಾವಚಿತ್ರ ಮತ್ತು ಸಹಿಯನ್ನು ಪ್ರವೇಶ ಪತ್ರದಲ್ಲಿ ಮುದ್ರಿಸಲಾಗಿದೆ. ವಿದ್ಯಾರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಮತ್ತೊಂದು ಭಾವಚಿತ್ರ ಮತ್ತು ಸಹಿಯೊಂದಿಗೆ ಅದಲು ಬದಲಾಗಿದ್ದಲ್ಲಿ ಸರಿಯಾದ ವಿದ್ಯಾರ್ಥಿಗಳ ಭಾವಚಿತ್ರ ಮತ್ತು ಸಹಿಯನ್ನು ಸಂಸ್ಥೆಯ ಪ್ರಾಂಶುಪಾಲರು ದೃಢೀಕರಿಸಿ Scan ಪ್ರತಿಯನ್ನು (ಭಾವಚಿತ್ರ-60-80 KB, ಸಹಿ-20-50 KB, ಇರುವಂತೆ JPEG FORMAT ನಲ್ಲಿ) adpisvsection@gmail.com ಗೆ Mail ಮಾಡಿ ಸರಿಪಡಿಸಿಕೊಳ್ಳುವುದು. ಪ್ರವೇಶ ಪತ್ರದಲ್ಲಿ ಹಾಗೂ ಕೇಂದ್ರ ನಾಮ ಪಟ್ಟಿಯಲ್ಲಿ ಭಾವಚಿತ್ರ ಇಲ್ಲದೇ ಇರುವ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ಅನುಮತಿ ನೀಡಲಾಗುವುದಿಲ್ಲ. ಇದರಿಂದ ವಿದ್ಯಾರ್ಥಿಗೆ ಆಗುವ ತೊಂದರೆಗೆ ಸಂಬಂಧಿಸಿದ ಸಂಸ್ಥೆಯ ಪ್ರಾಂಶುಪಾಲರೇ ಜವಾಬ್ದಾರರಾಗಿರುತ್ತಾರೆ ಎಂದು ಸ್ಪಷ್ಟ ಪಡಿಸಿದೆ.

7. ಯಾವುದೇ ವಿದ್ಯಾರ್ಥಿಯ ಭಾವಚಿತ್ರ ಬದಲಾವಣೆಗೆ ಸಂಬಂಧಿಸಿದಂತೆ, ಪರೀಕ್ಷೆಗೆ ಮುಂಚೆ ಮಾಡಲಾದ ಬದಲಾವಣೆಗಳನ್ನು ಮಾತ್ರ ಮಂಡಳಿಯು ಪರಿಗಣಿಸುತ್ತದೆ. ಕೇಂದ್ರ ನಾಮಪಟ್ಟಿಯಲ್ಲಿ ಯಾವುದೇ ಬದಲಾವಣೆಗಳನ್ನು ಮಾಡದೆ ಇದ್ದಲ್ಲಿ ನಾಮಪಟ್ಟಿಯಲ್ಲಿರುವ ಭಾವಚಿತ್ರದ ವಿದ್ಯಾರ್ಥಿಯೇ ನೈಜ ವಿದ್ಯಾರ್ಥಿ ಎಂದು ಪರಿಗಣಿಸಲಾಗುವುದು. ಪರೀಕ್ಷಾ ನಂತರದಲ್ಲಿ ಬರುವ ವಿದ್ಯಾರ್ಥಿಗಳ ಭಾವಚಿತ್ರ ಬದಲಾವಣೆ ಕುರಿತ ಯಾವುದೇ ಮನವಿಗಳನ್ನು ಮಂಡಳಿ ಪುರಸ್ಕರಿಸುವುದಿಲ್ಲ. ಇದಕ್ಕೆ ಸಂಬಂಧಿಸಿದ ಸಂಸ್ಥೆಯ ಪ್ರಾಂಶುಪಾಲರು ಹಾಗೂ ಪರೀಕ್ಷಾ ಕೇಂದ್ರದ ಅಧೀಕ್ಷಕರುಗಳೂ ನೇರ ಜವಾಬ್ದಾರರಾಗಿರುತ್ತಾರೆ. ಈ ರೀತಿ ಆದಲ್ಲಿ ಬದಲಿ ವಿದ್ಯಾರ್ಥಿ ಪರೀಕ್ಷೆ ಬರೆಯಲು ಸಹಕರಿಸಿ ಪರೀಕ್ಷಾ ಅವ್ಯವಹಾರದಲ್ಲಿ ಭಾಗಿಯಾಗಿರುತ್ತೀರೆಂದು ಪರಿಗಣಿಸಿ ಸಂಬಂಧಿಸಿದ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರ ಮತ್ತು ಶಾಲಾ ಪ್ರಾಂಶುಪಾಲರ ಮೇಲೆ ಕೆ.ಸಿ.ಎಸ್.ಆರ್ (ಸಿ.ಸಿ.ಎ) ನಿಯಮ-1957 ಮತ್ತು 1983 ರ ಕರ್ನಾಟಕ ಶಿಕ್ಷಣ ಕಾಯ್ದೆ ಹಾಗೂ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕಾಯ್ದೆ-1966 ರನ್ವಯ ಕ್ರಮ ಜರುಗಿಸಲಾಗುವುದು.
8. ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ನು ಪಾಲಿಸಲು ವಿದ್ಯಾರ್ಥಿಗಳಿಗೆ ಅಗತ್ಯವಾದ ಮಾಹಿತಿಯನ್ನು ನೀಡುವುದು.
9. ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪ್ರವೇಶ ಪತ್ರದಲ್ಲಿ ಪರೀಕ್ಷೆಗೆ ಹಾಜರಾಗುವ ವಿಷಯದ ಮುಂದೆ ನಮೂದಿಸಿರುವ ವಿಷಯ ಸಂಕೇತ ಹಾಗೂ ಬ್ಯಾಚ್ ಬಗ್ಗೆ ಖಚಿತ ಪಡಿಸಿಕೊಳ್ಳುವುದು. ನಂತರ ಕಡ್ಡಾಯವಾಗಿ ತಂಡ ಬದಲಾವಣೆಗೆ ಅವಕಾಶವಿರುವುದಿಲ್ಲ. ಈ ಸಂಬಂಧ ಶಾಲಾ ಪ್ರಾಂಶುಪಾಲರು ಅಭ್ಯರ್ಥಿಗಳಿಗೆ ಮಾಹಿತಿ ನೀಡುವುದು.

ಮೇಲ್ಕಂಡ ಅಂಶಗಳಂತೆ ನಿಮ್ಮ ಸಂಸ್ಥೆಯ ಎಲ್ಲಾ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆದ್ಯತೆ ಮೇರೆಗೆ ಕಡ್ಡಾಯವಾಗಿ ಪರಿಶೀಲಿಸಿಕೊಂಡು, ದಿನಾಂಕ:06.01.2022 ರೊಳಗೆ ವಿದ್ಯಾರ್ಥಿಗಳ ವಿವರಗಳನ್ನು ಅಪ್ ಡೇಟ್ ಮಾಡಲು ಸೂಚಿಸಿದೆ. ಕೊನೆಯ ದಿನಾಂಕದ ನಂತರ ಬರುವ ಮನವಿಗಳನ್ನು ಪರಿಗಣಿಸುವುದಿಲ್ಲ.

**ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಮತ್ತು ಶಾಖಾಧಿಕಾರಿಗಳು ವಾಣಿಜ್ಯ ವಿಭಾಗ, 4ನೇ ಮಹಡಿ, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003, ಮೊಬೈಲ್ ಸಂಖ್ಯೆ: 7892273533 ಮಂಡಳಿಯ ದೂರವಾಣಿ ಸಂಖ್ಯೆ:080-23360073 ಇ-ಮೇಲ್ ವಿಳಾಸ:** adpisvsection@gmail.com **ಸಂಪರ್ಕಿಸುವುದು. ಅಲ್ಲದೇ ಈ ಸಂಬಂಧ ಏನೇ ದೂರು/ಸಂಶಯಗಳಿದ್ದಲ್ಲಿ ಮಂಡಳಿಯಲ್ಲಿ ಸ್ಥಾಪಿಸಲ್ಪಟ್ಟಿರುವ ಸಹಾಯವಾಣಿ ಸಂಖ್ಯೆ: 080-23360073 ಸಂಪರ್ಕಿಸುವುದು.**

(ಎಂ.ಆರ್.ಮಾರುತಿ)
ನಿರ್ದೇಶಕರು,
(ಇತರೆ ಪರೀಕ್ಷೆಗಳು)

<u>ಇವರಿಗೆ:</u>

1. ರಾಜ್ಯದ ಎಲ್ಲಾ ವಾಣಿಜ್ಯ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು/ನೋಡಲ್ ಅಧಿಕಾರಗಳಿಗೆ ಅಗತ್ಯ ಕ್ರಮಕ್ಕಾಗಿ.
3. ಶಾಖಾಧಿಕಾರಿಗಳು, ಗಣಕಶಾಖೆ ಇವರಿಗೆ ಈ ಸುತ್ತೋಲೆಯನ್ನು ಅಂತರ್ ಜಾಲದಲ್ಲಿ ಪ್ರಕಟಿಸುವುದು.
4. ಕಛೇರಿ ಪ್ರತಿ.